ಬಂದಿರುವದಿಲ್ಲವೇ ಬಂದಿದ್ದಲ್ಲಿ ಪ್ರತ್ಯೇಕ ಆರಕ್ಷಕ ಠಾಣೆ ಮಂಜೂರು ಮಾಡಲು ಸರ್ಕಾರವು ಈ ವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣಗಳೇನು?

ಇ. ಚಿಕ್ಕಮಂಗಳೂರು ಜಿಲ್ಲಾ ಪೊಲೀಸ್ ಅಧೀಕ್ಷರು ಸರ್ಕಾರಕ್ಕೆ ಹಿರೇನಲ್ಲೂರು ಗ್ರಾಮಗಳಲ್ಲಿ ಆರಕ್ಷಕ ಠಾಣೆ ಮಂಜೂರಾತಿಗೆ ಶಿಫಾರಸ್ಸು ಮಾಡಿರುವುದಿಲ್ಲವೇ ಮಾಡಿದ್ದಲ್ಲಿ ಸರ್ಕಾರವು ಕೈಗೊಂಡಕ್ರಮವೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು)

ಅ. ಹಿರೇನಲ್ಲೂರು ಹೋಬಳಿಗೆ 49 ಗ್ರಾಮಗಳು ಸೇರುತ್ತದೆ. ಈ ಗ್ರಾಮಗಳು ಅಜ್ಜಂಪುರ, ಯಗಚಿ, ಬೀರೂರು ಹಾಗೂ ಕಡೂರು ಪೊಲೀಸ್ ಠಾಣೆಗಳ ವ್ಯಾಪ್ತಿಗೆ ಒಳಪಡುತ್ತದೆ.

ಆ. ಹಿರೇನಲ್ಲೂರು ಗ್ರಾಮದಲ್ಲಿ ಪ್ರತ್ಯೇಕ ಪೊಲೀಸ್ ಠಾಣೆ ತೆರೆಯಲು ಸಮರ್ಥನೆ ಇರುವುದಿಲ್ಲ.

ಇ. ಈ ಬಗ್ಗೆ ಒಂದು ಪ್ರಸ್ತಾವನೆ ಬಂದಿತ್ತಾದರೂ ಪರಿಶೀಲನೆ ನಂತರ ಸಮರ್ಥನೆ ಇಲ್ಲದ ಕಾರಣ ಪ್ರಸ್ತಾವನೆಯನ್ನು ಕೈಬಿಡಲಾಗಿದೆ.

ದೊಡ್ಡಬಳ್ಳಪುರ ನಗರದಲ್ಲಿ ಟ್ರಾಫಿಕ್ ಪೊಲೀಸ್ ಸ್ಟೇಷನ್

150(161) ಶ್ರೀ. ವಿ. ಕೃಷ್ಣಪ್ಪ(ದೊಡ್ಡಬಳ್ಳಾಪುರ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರವು ಕಂದಾಯ ಉಪ ವಿಭಾಗವಾಗಿದ್ದು ಕೈಗಾರಿಕಾ ವಸಾಹತುಗಳಿಂದ ಒಳಗೊಂಡಿದ್ದು ರಾಷ್ಟ್ರೀಯ ಹೆದ್ದಾರಿಯ ಲಿಂಕ್ ರಸ್ತೆಯಲ್ಲಿದ್ದು ವಾಹನ ಸಂಚಾರ ಹೆಚ್ಚಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ.

ಆ. ಹಾಗಿದ್ದಲ್ಲಿ ದೊಡ್ಡಬಳ್ಳಾಪುರ ನಗರದಲ್ಲಿ ಟ್ರಾಫಿಕ್ ಪೊಲೀಸ್ ಸ್ಟೇಷನ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು)

ಅ. ಕಳೆದ ಕೆಲವಾರು ವರ್ಷಗಳಿಗೆ ಹೋಲಿಸಿದರೆ ಇತ್ತೀಚಿನ ದಿನಗಳಲ್ಲಿ ಸ್ವಲ್ಪ ಮಟ್ಟಿಗೆ ವಾಹನ ಸಂಚಾರ ಹೆಚ್ಚಾಗಿರುತ್ತದೆ.

ಆ. ದೊಡ್ಡ ಬಳ್ಳಾಪುರ ನಗರದಲ್ಲಿ ಸಂಚಾರ ಪೊಲೀಸ್ ಠಾಣೆ ತರೆಯಲು ಸಮರ್ಥನೆ ಇರುವುದಿಲ್ಲ.

ದೊಡ್ಡ ಬಳ್ಳಾಪುರ ನಗರಸಭೆಯಲ್ಲಿ ಪೌರಕಾರ್ಮಿಕರ ನೇಮಕಾತಿ

152(179) ಶ್ರೀ ವಿ.ಕೃಷ್ಣಪ್ಪ (ದೊಡ್ಡಬಳ್ಳಾಪುರ) : ಮಾನ್ಯ ನಗರಾಭಿವೃದ್ದಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ದೊಡ್ಡಬಳ್ಳಾಪುರ ನಗರಸಭೆಯಲ್ಲಿ ಪೌರಕಾರ್ಮಿಕರ ಕೊರತೆಯಿಂದಾಗಿ ನಿತ್ಯ ಕೆಲಸ ಕಾರ್ಯಗಳಿಗೆ ಹಾಗೂ ನಗರ ಸ್ವಚ್ಚತೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಹಾಗಿದ್ದಲ್ಲಿ, ಪೌರ ಕಾರ್ಮಿಕರುಗಳ ನೇಮಕಾತಿಗೆ ಕ್ರಮ ತೆಗೆದುಕೊಳ್ಳಲಾಗುವುದೆ, ಇಲ್ಲದಿದ್ದಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ ಕಾರ್ಯಗಳನ್ನು ಮಾಡಿಸಲು ಕ್ರಮ ತೆಗೆದುಕೊಳ್ಳಲಾಗುವುದೆ;